All India Radio: Bangalore
National Bulletin In Kannada
03.09.2026  07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
03.09.2026  07.35 a.m.
<><><><>

ಮುಖ್ಯಾಂಶಗಳು

- ನವದೆಹಲಿಯಲ್ಲಿ ಇಂದು ಬೆಲ್ಜಿಯಂ ಪ್ರಧಾನಿ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ
- ನಗರ ಸ್ಥಳೀಯ ಸಂಸ್ಥೆಗಳಿಗೆ ಅರಿವು ಮೂಡಿಸಲು ಚಿಂತನ ಶಿಬಿರಗಳ ಆಯೋಜನೆಗೆ ಪ್ರಧಾನಿ ಕರೆ
- ನೇಪಾಳ ಪ್ರವಾಹ; ಮೃತಪಟ್ಟವರ ಸಂಖ್ಯೆ ಒಂದು ಸಾವಿರದ ೨೫೦ಕ್ಕೆ ಏರಿಕೆ, ಇದುವರೆಗೆ ೧೧ ಸಾವಿರದ ೯೯೩ ಜನರ ರಕ್ಷಣೆ
- ಟಿ-೨೦ ಮಹಿಳಾ ಏಷ್ಯಾಕಪ್ ಕ್ರಿಕೆಟ್: ಇಂದಿನ ಪಂದ್ಯದಲ್ಲಿ ಭಾರತ-ಹಾಂಗ್‌ಕಾಂಗ್ ಮುಖಾಮುಖಿ

<><><><>

ಪ್ರಧಾನಿ ನರೇಂದ್ರ ಮೋದಿ ಇಂದು ನವದೆಹಲಿಯಲ್ಲಿ ಬೆಲ್ಜಿಯಂ ಪ್ರಧಾನಿ ಬಾರ್ಟ್ ಡಿ ವೆವರ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಉಭಯ ದೇಶಗಳ ನಡುವೆ ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಂಬಂಧಗಳ ಬಲವರ್ಧನೆ ಜೊತೆಗೆ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಇಬ್ಬರು ನಾಯಕರು ಚರ್ಚಿಸಲಿದ್ದಾರೆ. ಬೆಲ್ಜಿಯಂ ಪ್ರಧಾನಿ ಮೂರು ದಿನಗಳ ಭಾರತ ಭೇಟಿಗಾಗಿ ನಿನ್ನೆ ರಾತ್ರಿ ನವದೆಹಲಿಗೆ ಆಗಮಿಸಿದರು. ಅವರೊಂದಿಗೆ ಬೆಲ್ಜಿಯಂ ರಕ್ಷಣಾ ಸಚಿವ ಥಿಯೋ ಫ್ರಾಂಕೆನ್ ಕೂಡ ಆಗಮಿಸಿದ್ದಾರೆ. ಕಳೆದ ವರ್ಷ ಫೆಬ್ರವರಿಯಲ್ಲಿ ಅಧಿಕಾರ ವಹಿಸಿಕೊಂಡ ನಂತರ ಇದು ಬಾರ್ಟ್ ಡಿ ವೆವರ್ ಅವರ ಮೊದಲ ಭಾರತ ಭೇಟಿಯಾಗಿದೆ. ಭಾರತ-ಐರೋಪ್ಯ ಒಕ್ಕೂಟದ ಮುಕ್ತ ವ್ಯಾಪಾರ ಒಪ್ಪಂದದ ಸಂದರ್ಭದಲ್ಲಿ, ಭಾರತೀಯ ಕೈಗಾರಿಕಾ ವ್ಯವಹಾರಗಳ ಒಕ್ಕೂಟದ ಕಾರ್ಯಕ್ರಮದಲ್ಲಿ ಅವರು ಪ್ರಮುಖ ಭಾಷಣ ಮಾಡಲಿದ್ದಾರೆ.

ಈ ಭೇಟಿಯು ಭಾರತ-ಬೆಲ್ಜಿಯಂ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ಹಾಗೂ ವ್ಯಾಪಾರ ಮತ್ತು ಹೂಡಿಕೆ, ರಕ್ಷಣೆ ಮತ್ತು ಭದ್ರತೆ, ನವೀಕರಿಸಬಹುದಾದ ಇಂಧನ ಸೇರಿದಂತೆ ಪರಸ್ಪರ ಆಸಕ್ತಿಯ ಕ್ಷೇತ್ರಗಳಲ್ಲಿ ಸಹಕಾರವನ್ನು ಮುನ್ನಡೆಸಲು ಅವಕಾಶವನ್ನು ಒದಗಿಸುತ್ತದೆ.

<><><><>

ನಗರೀಕರಣದಿಂದ ಉಂಟಾಗುವ ಸವಾಲುಗಳಾದ ಜನಸಂಖ್ಯೆ ಬೆಳವಣಿಗೆ ಮತ್ತು ಭವಿಷ್ಯದ ನೀರಿನ ಅವಶ್ಯಕತೆಗಳ ಬಗ್ಗೆ ನಗರ ಸ್ಥಳೀಯ ಸಂಸ್ಥೆಗಳಿಗೆ ಅರಿವು ಮೂಡಿಸಲು ಚಿಂತನ ಶಿಬಿರಗಳನ್ನು ಆಯೋಜಿಸುವಂತೆ ಪ್ರಧಾನಿ ನರೇಂದ್ರ ಮೋದಿ ಸಲಹೆ ನೀಡಿದ್ದಾರೆ. ಜಲಶಕ್ತಿ ಸಚಿವಾಲಯ ಆಯೋಜಿಸಿದ್ದ ಎರಡು ದಿನಗಳ ರಾಷ್ಟ್ರೀಯ ನೀರಿನ ಶೃಂಗಸಭೆಯ ಸಮಾರೋಪ ಅಧಿವೇಶನ ಉದ್ದೇಶಿಸಿ ಮಾತನಾಡಿದ ಅವರು, ನೀರು ಉಳಿಸುವ ತಂತ್ರಜ್ಞಾನಗಳನ್ನು ಹೆಚ್ಚು ಅಳವಡಿಸಿಕೊಳ್ಳುವಂತೆ ಕರೆ ನೀಡಿದರು. ಭಾರತೀಯ ತಯಾರಕರು ಮತ್ತು ಪಾಲುದಾರರು ಪರಿಣಾಮಕಾರಿ ಪರಿಹಾರಗಳನ್ನು ಅಭಿವೃದ್ಧಿಪಡಿಸಲು ಅನುವು ಮಾಡಿಕೊಡಲು ಜಾಗತಿಕ ಅತ್ಯುತ್ತಮ ಅಭ್ಯಾಸಗಳಿಗೆ ಒಡ್ಡಿಕೊಳ್ಳುವುದು ಸೇರಿದಂತೆ ಅದಕ್ಕೆಂದೇ ಮೀಸಲಾದ ಪ್ರದರ್ಶನಗಳು ಮತ್ತು ಕಾರ್ಯಾಗಾರಗಳನ್ನು ಆಯೋಜಿಸುವಂತೆ ಅವರು ನಿರ್ದೇಶಿಸಿದರು. ಜನರಲ್ಲಿ ಹೆಚ್ಚಿನ ಜಾಗೃತಿ ಮೂಡಿಸಲು 'ಜಲ ಉತ್ಸವ'ವನ್ನು ಉತ್ತೇಜಿಸುವಂತೆ ಸಲಹೆ ನೀಡಿದ ಪ್ರಧಾನಿ ನರೇಂದ್ರ ಮೋದಿ, ಕೆರೆಗಳಲ್ಲಿ ಹೂಳು ತೆಗೆಯುವುದನ್ನು ನಿಯಮಿತ ಕಾರ್ಯಕ್ರಮವನ್ನಾಗಿ ಮಾಡಲು ಮತ್ತು ಹೂಳು ತೆಗೆಯಲು ಸ್ಪಷ್ಟ ಮಾನದಂಡಗಳನ್ನು ರೂಪಿಸುವಂತೆ ಕರೆ ನೀಡಿದರು.

<><><><>

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ಇಂದಿನಿಂದ ಮೂರು ದಿನಗಳ ಕಾಲ ಉಕ್ರೇನ್ ಮತ್ತು ಪೋಲೆಂಡ್‌ಗೆ ಭೇಟಿ ನೀಡಲಿದ್ದಾರೆ. ಭೇಟಿಯ ಸಂದರ್ಭದಲ್ಲಿ ಡಾ.ಜೈಶಂಕರ್ ಅವರು ಉಕ್ರೇನ್‌ನ ವಿದೇಶಾಂಗ ಸಚಿವ ಆಂಡ್ರಿ ಸಿಬಿಹಾ ಮತ್ತು ಪೋಲೆಂಡ್‌ನ ಉಪ ಪ್ರಧಾನಮಂತ್ರಿ ಹಾಗೂ ವಿದೇಶಾಂಗ ಸಚಿವ ರಾಡೊಸ್ಲಾವ್ ಸಿಕೋರ್ಸ್ಕಿ ಅವರೊಂದಿಗೆ ದ್ವಿಪಕ್ಷೀಯ ಸಮಾಲೋಚನೆ ನಡೆಸಲಿದ್ದಾರೆ. ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವುದು ಜೈಶಂಕರ್ ಅವರ ಭೇಟಿಯ ಪ್ರಮುಖ ಉದ್ದೇಶವಾಗಿದೆ.

ಪ್ರಾದೇಶಿಕ ಬೆಳವಣಿಗೆಗಳು ಹಾಗೂ ಪರಸ್ಪರ ಹಿತಾಸಕ್ತಿಯ ವಿಷಯಗಳ ಕುರಿತು ಅಭಿಪ್ರಾಯ ವಿನಿಮಯಕ್ಕೂ ಈ ಭೇಟಿ ಅವಕಾಶ ಕಲ್ಪಿಸಲಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

<><><>

ಮುಂದಿನ ವಾರ ಭಾರತದಲ್ಲಿ ನಡೆಯಲಿರುವ ಬ್ರಿಕ್ಸ್ ಶೃಂಗಸಭೆಯಲ್ಲಿ ಭಾಗವಹಿಸಲು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರಸ್ ಅವರು ಭಾರತಕ್ಕೆ ಭೇಟಿ ನೀಡಲಿದ್ದಾರೆ ಎಂದು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿಗಳ ಅಧಿಕೃತ ವಕ್ತಾರ ಸ್ಟೀಫನ್ ದುಜಾರಿಕ್ ತಿಳಿಸಿದ್ದಾರೆ. ಈ ವರ್ಷದ ಡಿಸೆಂಬರ್‌ನಲ್ಲಿ ವಿಶ್ವಸಂಸ್ಥೆಯ ಮುಖ್ಯಸ್ಥರಾಗಿ ತಮ್ಮ ಅಧಿಕಾರಾವಧಿಯನ್ನು ಪೂರ್ಣಗೊಳಿಸಲಿರುವ ಗುಟೆರಸ್ ಅವರಿಗೆ ಇದು ಭಾರತಕ್ಕೆ ಐದನೇ ಭೇಟಿಯಾಗಿದ್ದು, ಈ ವರ್ಷದ ಎರಡನೇ ಪ್ರವಾಸವಾಗಿದೆ. ಇದೇ ೧೨ ರಿಂದ ಪ್ರಾರಂಭವಾಗಲಿರುವ ಈ ಶೃಂಗಸಭೆಯಲ್ಲಿ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ಚೀನಾ ಅಧ್ಯಕ್ಷ ಕ್ಷಿ ಜಿನ್‌ಪಿಂಗ್ ಹಾಗೂ ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯನ್ ಭಾಗವಹಿಸುವ ನಿರೀಕ್ಷೆಯಿದೆ.

<><><>

ಕೇಂದ್ರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಅವರು ಇಂದು ಮುಂಬೈನಲ್ಲಿ ಬ್ಯಾಂಕುಗಳು ಮತ್ತು ರಾಜ್ಯ ಗ್ರಾಮೀಣ ಜೀವನೋಪಾಯ ಮಿಷನ್‌ಗಳ ಉನ್ನತ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಸ್ವ-ಸಹಾಯ ಗುಂಪುಗಳಿಗೆ ಸರಾಸರಿ ವಿತರಣೆಯ ಪ್ರಮಾಣವನ್ನು ಹೆಚ್ಚಿಸಲು ವೈಯಕ್ತಿಕ ಉದ್ಯಮ ಸಾಲ ಬಂಡವಾಳವನ್ನು ದ್ವಿಗುಣಗೊಳಿಸುವ ಬಗ್ಗೆ ಸಭೆ ಗಮನಹರಿಸಲಿದೆ.

<><><>

ನೇಪಾಳ-ಟಿಬೆಟ್ ನಲ್ಲಿ ಸಂಭವಿಸಿದ ಭೀಕರ ಪ್ರವಾಹದಲ್ಲಿ ಸಾವನ್ನಪ್ಪಿದವರ ಸಂಖ್ಯೆ ಒಂದು ಸಾವಿರದ ೨೫೦ ಕ್ಕೆ ಏರಿಕೆಯಾಗಿದೆ. ನೇಪಳದ ಭೋಟೆಕೋಶಿ ನದಿ ಮತ್ತು ಭೂಗತ ವಿದ್ಯುತ್ ಕೇಂದ್ರಗಳ ಉದ್ದಕ್ಕೂ ಸುರಂಗಗಳಲ್ಲಿ ಸಿಲುಕಿರುವವರನ್ನು ಪತ್ತೆಹಚ್ಚಲು ರಕ್ಷಣಾ ತಂಡಗಳು ಮಳೆ ಮತ್ತು ಅವಶೇಷಗಳ ನಡುವೆ ಕಾರ್ಯಾಚರಣೆ ನಡೆಸುತ್ತಿವೆ. ಕಾಣೆಯಾದವರಲ್ಲಿ ೫೮೩ ಜನರು ವಿದೇಶಿಯರಾಗಿದ್ದಾರೆ.

ನೇಪಾಳ ಸೇನೆ ಸೇರಿದಂತೆ ಭದ್ರತಾ ಸಿಬ್ಬಂದಿಯ ಜಂಟಿ ಪಡೆಗಳು ಇಲ್ಲಿಯವರೆಗೆ ಹೆಲಿಕಾಪ್ಟರ್‌ಗಳು ಮತ್ತು ಭೂ ಮಾರ್ಗಗಳನ್ನು ಬಳಸಿಕೊಂಡು ೧೧ ಸಾವಿರದ ೬೯೩ ಜನರನ್ನು ರಕ್ಷಿಸಿವೆ.  ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಗಾಗಿ ಸುಮಾರು ೨೧ ಸಾವಿರದ ೩೧೪ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಚೀನಾದ ಕಡೆಯಿಂದ, ನೇಪಾಳ ಗಡಿಯ ಬಳಿ ಟಿಬೆಟ್‌ನ ಗೈರಾಂಗ್ ಕೌಂಟಿಯಲ್ಲಿ ಸಂಭವಿಸಿದ ಹಠಾತ್ ಪ್ರವಾಹದಲ್ಲಿ ಸಾವನ್ನಪ್ಪಿದವರ ಸಂಖ್ಯೆ ೨೧ ಕ್ಕೆ ಏರಿದ್ದು, ಇನ್ನೂ ೫೪೧ ಜನರು ಕಾಣೆಯಾಗಿದ್ದಾರೆ.

<><><><>

ಉಕ್ರೇನ್‌ನಲ್ಲಿ ನಡೆಯುತ್ತಿರುವ ಯುದ್ಧವನ್ನು ಕೊನೆಗೊಳಿಸಲು ರಷ್ಯಾ, ಶಾಂತಿ ಒಪ್ಪಂದಕ್ಕೆ ಕೆಲಸ ಮಾಡಲು ಸಿದ್ಧವಾದಾಗ ಮಾತ್ರ, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ಮತ್ತೊಂದು ಶೃಂಗಸಭೆ ನಡೆಸಲು ಸಿದ್ಧ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ರಷ್ಯಾ ಮತ್ತು ಉಕ್ರೇನ್ ಎರಡರೊಂದಿಗೂ ಅಮೆರಿಕ ಉತ್ತಮ ಸಂಬಂಧವನ್ನು ಕಾಯ್ದುಕೊಳ್ಳುವುದು ತಮ್ಮ ಬಯಕೆಯಾಗಿದ್ದು, ಸಂಬಂಧಗಳನ್ನು ಸುಧಾರಿಸುವುದು ವ್ಯವಹಾರಕ್ಕೂ ಪ್ರಯೋಜನಕಾರಿ ಎಂದು ಅವರು ಹೇಳಿದ್ದಾರೆ. ರಷ್ಯಾ-ಉಕ್ರೇನ್ ಯುದ್ಧದ ಅಂತ್ಯಗೊಳಿಸುವ ನಿಟ್ಟಿನಲ್ಲಿ ಚರ್ಚಿಸಲು ಟ್ರಂಪ್ ಮತ್ತು ಪುಟಿನ್ ೨೦೨೫ ರ ಆಗಸ್ಟ್‌ನಲ್ಲಿ ಅಲಾಸ್ಕಾದಲ್ಲಿ ಕೊನೆಯ ಬಾರಿಗೆ ಭೇಟಿಯಾಗಿದ್ದರು.

<><><><>

ದೇಶದ ಪ್ರತಿಯೊಂದು ಜಿಲ್ಲೆಯ ರಫ್ತು ಸಾಮರ್ಥ್ಯವನ್ನು ಬಳಸಿಕೊಳ್ಳಲು ಕೇಂದ್ರ ಸರ್ಕಾರ, 'ರಫ್ತು ಕೇಂದ್ರಗಳಾಗಿ ಜಿಲ್ಲೆಗಳು' ಉಪಕ್ರಮ ಜಾರಿಗೊಳಿಸಿದೆ. ಈ ಯೋಜನೆಯಡಿ ಸ್ಥಳೀಯ ಉತ್ಪನ್ನಗಳು ಮತ್ತು ಸೇವೆಗಳನ್ನು ಜಾಗತಿಕ ಮಾರುಕಟ್ಟೆಗೆ ಪರಿಚಯಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಭೌಗೋಳಿಕ ಮಾನ್ಯತೆ ಪಡೆದ ಉತ್ಪನ್ನಗಳು, ಕೃಷಿ ಉತ್ಪನ್ನಗಳು, ಆಟಿಕೆಗಳು ಮತ್ತು ಎಂಜಿನಿಯರಿಂಗ್ ಉತ್ಪನ್ನಗಳಿಗೆ ಆದ್ಯತೆ ನೀಡಲಾಗಿದೆ. ಈ ವರ್ಷದ ಜನವರಿವರೆಗೆ ದೇಶದ ೭೭೦ಕ್ಕೂ ಹೆಚ್ಚು ಜಿಲ್ಲೆಗಳು ಯೋಜನೆಯ ವ್ಯಾಪ್ತಿಗೆ ಬಂದಿವೆ.

ಆತ್ಮನಿರ್ಭರ ಭಾರತ ಮತ್ತು ವೋಕಲ್ ಫಾರ್ ಲೋಕಲ್ ಪರಿಕಲ್ಪನೆಗಳಿಗೆ ಪೂರಕವಾಗಿರುವ ಈ ಯೋಜನೆ, ದೇಶದ ೧ ಟ್ರಿಲಿಯನ್ ಡಾಲರ್ ರಫ್ತು ಗುರಿ ಸಾಧನೆಗೆ ಸಹಕಾರಿಯಾಗಲಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

<><><><>

ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಟಿ-೨೦ ಮಹಿಳಾ ಏಷ್ಯಾಕಪ್ ಕ್ರಿಕೆಟ್ ಪಂದ್ಯಾವಳಿಯ ತನ್ನ ಎರಡನೇ ಗುಂಪು 'ಎ' ಪಂದ್ಯದಲ್ಲಿ ಭಾರತ ತಂಡ ಇಂದು ಹಾಂಗ್‌ಕಾಂಗ್ ತಂಡದ ವಿರುದ್ಧ ಸೆಣಸಲಿದೆ.  ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಭಾನುವಾರ ದುಬೈನಲ್ಲಿ ನಡೆದ ಪಂದ್ಯದಲ್ಲಿ ಥೈಲ್ಯಾಂಡ್ ತಂಡದ ವಿರುದ್ಧ ೯೪ ರನ್‌ಗಳ ಭರ್ಜರಿ ಜಯ ಸಾಧಿಸುವ ಮೂಲಕ ಭಾರತ ಮಹಿಳಾ ತಂಡ, ತನ್ನ ಅಭಿಯಾನ ಆರಂಭಿಸಿತು.

<><><><>

ಭಾರತ ಇದೇ ೫ ರಿಂದ ೯ ರವರೆಗೆ ಅಹಮದಾಬಾದ್‌ನ ಸಬರಮತಿ ನದಿ ತೀರದಲ್ಲಿ ಇದೇ ಮೊದಲ ಬಾರಿಗೆ ಹುಂಡೈ ವರ್ಲ್ಡ್ ಆರ್ಚರಿ ಪ್ಯಾರಾ ಸರಣಿಯನ್ನು ಆಯೋಜಿಸಲಿದ್ದು, ೨೦ ದೇಶಗಳಿಂದ ೧೦೦ ಕ್ಕೂ ಹೆಚ್ಚು ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ. ಜೂನ್ ೩೦ ರಿಂದ ಜುಲೈ ೪ ರವರೆಗೆ ಬ್ಯಾಂಕಾಕ್ ಮತ್ತು ಜೆಕಿಯಾದ ನೋವ್ ಮೆಸ್ಟೊದಲ್ಲಿ ನಡೆದ ಸ್ಪರ್ಧೆಗಳ ನಂತರ ಇದು ೨೦೨೬ ರ ಸರಣಿಯ ಮೂರನೇ ಹಂತವಾಗಿದೆ. ನಾಲ್ಕನೇ ಮತ್ತು ಅಂತಿಮ ಹಂತವು ಅಕ್ಟೋಬರ್‌ನಲ್ಲಿ ಚಿಲಿಯ ಸ್ಯಾಂಟಿಯಾಗೊದಲ್ಲಿ ನಡೆಯಲಿದೆ. ಗುಜರಾತ್ ಸರ್ಕಾರ, ಗುಜರಾತ್ ಕ್ರೀಡಾ ಪ್ರಾಧಿಕಾರ ಮತ್ತು ಭಾರತ ಕ್ರೀಡಾ ಪ್ರಾಧಿಕಾರ ಈ ಕ್ರೀಡಾಕೂಟವನ್ನು ಆಯೋಜಿಸಲಿದೆ. ಚೀನಾ, ಬ್ರಿಟನ್, ಫ್ರಾನ್ಸ್, ಜರ್ಮನಿ, ಹಂಗೇರಿ, ಇಂಡೋನೇಷ್ಯಾ, ಇರಾನ್, ಕಝಾಕಿಸ್ತಾನ್, ಮೆಕ್ಸಿಕೊ, ಸ್ಲೋವಾಕಿಯಾ, ಅಮೆರಿಕಾ, ಉಜ್ಬೇಕಿಸ್ತಾನ್, ಬಾಂಗ್ಲಾದೇಶ, ಭೂತಾನ್, ಸೈಪ್ರಸ್, ಜೆಕಿಯಾ, ಇರಾಕ್, ರಷ್ಯಾ ಮತ್ತು ಶ್ರೀಲಂಕಾ ಕ್ರೀಡಾಕೂಟದಲ್ಲಿ ಭಾಗವಹಿಸಲಿವೆ. ಸೆಪ್ಟೆಂಬರ್ ೪ ರಂದು ಔಪಚಾರಿಕವಾಗಿ ಕ್ರೀಡಾಕೂಟ ಉದ್ಘಾಟನೆಯಾಗಲಿದೆ.

<><><><>

ಭಾರತದ ಶಟ್ಲರ್‌ಗಳಾದ ಕಿದಂಬಿ ಶ್ರೀಕಾಂತ್ ಮತ್ತು ತನ್ವಿ ಶರ್ಮಾ ಚೀನಾ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಎರಡನೇ ಸುತ್ತಿಗೆ ಮುನ್ನಡೆದಿದ್ದಾರೆ.

ಶೆಜನೆನ್‌ನಲ್ಲಿ ನಡೆದ ಪುರುಷರ ಸಿಂಗಲ್ಸ್‌ನ ಆರಂಭಿಕ ಪಂದ್ಯದಲ್ಲಿ ಶ್ರೀಕಾಂತ್, ಚೈನೀಸ್ ತೈಪೆಯ ಚಿ ಯು ಜೆನ್ ಅವರನ್ನು ೨೧-೧೯ ೨೧-೧೫ ಅಂತರದಿಂದ ಸೋಲಿಸಿದರು. ಮತ್ತೊಂದು ಪುರುಷರ ಸಿಂಗಲ್ಸ್ ಪಂದ್ಯದಲ್ಲಿ ಲಕ್ಷ್ಯ ಸೇನ್, ಕೆನಡಾದ ವಿಕ್ಟರ್ ಲೈ ವಿರುದ್ಧ ೧೪-೨೧ ೭-೨೧ ಅಂತರದಿಂದ ಸೋತ ನಂತರ ಪಂದ್ಯಾವಳಿಯಿಂದ ಹೊರಬಿದ್ದರು. ಮಹಿಳಾ ಸಿಂಗಲ್ಸ್‌ನ ಮೊದಲ ಸುತ್ತಿನ ಪಂದ್ಯದಲ್ಲಿ, ಭಾರತದ ತನ್ವಿ ಶರ್ಮಾ, ಡೆನ್ಮಾರ್ಕ್‌ನ ಅಮಾಲಿ ಜಲ್‌ಅವರನ್ನು ೨೧-೧೬, ೨೧-೧೭ ನೇರ ಸೆಟ್‌ಗಳಿಂದ ಪರಾಭವಗೊಳಿಸಿದರು. ಇದೇ ವೇಳೆ, ಭಾರತದ ದೇವಿಕಾ ಸಹಗ್, ಬಲ್ಗೇರಿಯಾದ ಕಲೋಯನಾ ನಲಬಂಟೋವಾ ವಿರುದ್ಧ ೧೮-೨೧, ೧೫-೨೧ ಅಂತರದಿಂದ ಸೋತರು. ಮಿಶ್ರ ಡಬಲ್ಸ್ ವಿಭಾಗದಲ್ಲಿ ಭಾರತದ ಧ್ರುವ್ ಕಪಿಲಾ ಮತ್ತು ತನಿಶಾ ಕ್ರಾಸ್ಟೊ ಜೋಡಿಯು, ಥೈಲ್ಯಾಂಡ್‌ನ ಟೊನ್ನಕಾರ್ನ್ ಸಾಹೆಂಗ್ ಮತ್ತು ಟೊನ್ನಿಚಾ ಸಾಹೆಂಗ್ ಅವರನ್ನು ೨೧-೮, ೨೧-೯ ಅಂತರದಿಂದ ಸೋಲಿಸಿ, ಮುಂದಿನ ಸುತ್ತಿಗೆ ಮುನ್ನಡೆದಿದೆ.

<><><><>

ಕೇಂದ್ರ ಸರ್ಕಾರ, ೨೦೨೪ ರ ಟೆನ್ಜಿಂಗ್ ನಾರ್ಗೆ ರಾಷ್ಟ್ರೀಯ ಸಾಹಸ ಪ್ರಶಸ್ತಿಗಳನ್ನು ಘೋಷಿಸಿದೆ. ಭೂ ಸಾಹಸ ವಿಭಾಗದಲ್ಲಿ ಬಲ್ಜೀತ್ ಕೌರ್ ಮತ್ತು ಸ್ಕಲ್ಜಾಂಗ್ ರಿಗ್ಜಿನ್, ಜಲ ಸಾಹಸ ವಿಭಾಗದಲ್ಲಿ ರಿಮೋ ಸಹಾ ಮತ್ತು ಜೀವಮಾನ ಸಾಧನೆ ವಿಭಾಗದಲ್ಲಿ ಶಿವ ಪ್ರಸಾದ್ ಚಮೋಲಿ ಪ್ರಶಸ್ತಿ ಪುರಸ್ಕೃತರು. ಪ್ರಶಸ್ತಿ ಪುರಸ್ಕೃತರಿಗೆ ತಲಾ ೧೫ ಲಕ್ಷ ರೂಪಾಯಿಗಳ ನಗದು ಮತ್ತು ಪ್ರಮಾಣಪತ್ರ ಪ್ರದಾನ ಮಾಡಲಾಗುತ್ತದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>